ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) –ಇಲ್ಲ–

ಆ) ಉದ್ಭವಿಸುವುದಿಲ್ಲ

1609 (2114) ಶ್ರೀ ನರಸಿಂಹಸ್ವಾಮಿ ಜೆ (ದೊಡ್ಡಬಳ್ಳಾಪುರ) –ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಮಾಧ್ಯಮದ ಶಾಲೆಗಳಿಗೆ ಅನುಮತಿ ಪಡೆದು ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡುತ್ತಿರುವ ಶಾಲೆಗಳ ಮಾನ್ಯತೆಯನ್ನು ರದ್ದುಪಡಿಸುವುದು ಹಾಗೂ ಆ ಶಾಲೆಗಳಿಗೆ ವಿದ್ಯಾರ್ಥಿಗಳನ್ನು ಸೇರಿಸಬಾರದೆಂದು ಪತ್ರಿಕೆಗಳಲ್ಲಿ ಪ್ರಕಟಿಸಿರುವುದು ನಿಜವಲ್ಲವೇ,

ಆ) ಬಂದಿದ್ದಲ್ಲಿ, ಇಂತಹ ಶಾಲೆಗಳ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗಿದೆ,

ಇ) ಇಲ್ಲದಿದ್ದಲ್ಲಿ, ಗ್ರಾಮಾಂತರ ಪ್ರದೇಶಗಳಲ್ಲಿಯೂ ಸಹ ಸಮಾನ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸಲು ಸರ್ಕಾರ ಯಾವುದಾದರೂ ಕ್ರಮ ತೆಗೆದುಕೊಂಡಿದೆಯೇ,

ಈ) ಆಂಗ್ಲ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡಿರುವ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸರ್ಕಾರ ಯಾವ ಪರ್ಯಾಯ ಯೋಜನೆಯನ್ನು ರೂಪಿಸಿದೆ?

ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು

ಆ) ಕನ್ನಡ ಮಾಧ್ಯಮದಲ್ಲಿ ಬೋಧನೆ ಮಾಡಲು ಅನುಮತಿ ಪಡೆದು, ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡಿ, ಸರ್ಕಾರದ ನೀತಿಯನ್ನು ಉಲ್ಲಂಘಿಸಿದ ಶಾಲೆಗಳ ಮಾನ್ಯತೆಯನ್ನು ನಿಯಮಾನುಸಾರ ರದ್ದುಪಡಿಸಲಾಗಿದೆ

ಇ) ಸರ್ಕಾರದ ದಿನಾಂಕ 21–10–2006 ರ ಆದೇಶ ಸಂಖ್ಯೆ ಇಡಿ 37 ಪಿಜಿಸಿ 2003 ರಲ್ಲಿ 1 ನೇ ತರಗತಿಯಿಂದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ

ಶಾಲೆಗಳಲ್ಲಿ ಇಂಗ್ಲೀಷನ್ನು ಒಂದು ಭಾಷೆಯನ್ನಾಗಿ ಕಲಿಸಲು ಆಸ್ಪದ ಕಲ್ಪಿಸಲಾಗಿದೆ

ಈ) ಅನಧಿಕೃತ ಆಂಗ್ಲ ಮಾಧ್ಯಮ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳಿಗೆ, ಮುಂದಿನ ಶೈಕ್ಷಣಿಕ ಸಾಲಿನಿಂದ ಸದರಿ ಶಾಲೆಗಳ ಸುತ್ತಮುತ್ತಲಿನ ಸರ್ಕಾರಿ ಶಾಲೆಗಳು, ಅನುದಾನಿತ ಶಾಲೆಗಳು ಹಾಗೂ ಅನುದಾನರಹಿತ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾಭ್ಯಾಸ ಮುಂದುವರೆಸಲು ಪರ್ಯಾಯ ವ್ಯವಸ್ಥೆ ಕಲ್ಪಿಸಲು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ತಿಳಿಸಲಾಗಿದೆ

1611 (1909) ಶ್ರೀ ಪಾಟೀಲ್ ಬಿ ಆರ್ (ಆಳಂದ) – ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಹಾರಾಷ್ಟ್ರ ರಾಜ್ಯದ ಗಡಿಭಾಗದಿಂದ ನದಿ–ಹಳ್ಳ–ನಾಲೆಗಳಿಂದ ನೀರು ಕರ್ನಾಟಕದ ಗಡಿಗೆ ಸ್ವಾಭಾವಿಕವಾಗಿ ಹರಿದು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಮಹಾರಾಷ್ಟ್ರ ಸರ್ಕಾರ ಈ ನದಿ–ಹಳ್ಳ– ನಾಲೆಗಳ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳುತ್ತಿರುವುದರಿಂದ ಆ ನೀರು ಅನೇಕ ಕಡೆ ಬರದೆ ತೊಂದರೆಯಾಗಿರುವುದನ್ನು ಸರ್ಕಾರ ಗಮನಿಸಿದೆಯೇ,

ಇ) ಗಮನಿಸಿದ್ದರೆ, ಇದಕ್ಕೆ ಪರಿಹಾರವೇನು?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ಬಂದಿದೆ

ಆ) ಮಹಾರಾಷ್ಟ್ರ ಗಡಿಭಾಗದಲ್ಲಿ ನದಿಗಳ ಮಾಪನ ಮಾಹಿತಿಯನ್ನು ಪರಿಶೀಲಿಸಿದಾಗ ಇತ್ತೀಚಿನ ವರ್ಷಗಳಲ್ಲಿ ನದಿಗಳಲ್ಲಿ ಹರಿವು ಕಡಿಮೆಯಾಗಿರುವುದು ಕಂಡುಬರುತ್ತದೆ

ಇ) ಈ ಕುರಿತು ವಿವರವಾಗಿ ಪರಿಶೀಲಿಸಬೇಕಾಗಿದೆ

1612 (1472) ಶ್ರೀ ಪಾಟೀಲ್ ಎಸ್ ಎಸ್ (ಮುಂಡರಗಿ) – ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?